**ಕರ್ನಾಟಕ ಸರ್ಕಾರ**

ಸಂಖ್ಯೆ: ಕಂಇ 158 ಟಿಎನ್‌ಆರ್ 2020

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ:09-04-2021.

# ಆದೇಶ

1) ಭಾರತ ಸರ್ಕಾರದ ಕೇಂದ್ರ ಗೃಹ ಮಂತ್ರಾಲಯವು ಆದೇಶ ಸಂಖ್ಯೆ:40-3/2020-ಡಿಎಂ-I(ಎ), ದಿನಾಂಕ:23.03.2021ರಲ್ಲಿ ಕೋವಿಡ್-19 ಸೋಂಕು ನಿಯಂತ್ರಣಕ್ಕೆ ಸಂಬಂಧಿಸಿದಂತೆ ಮಾರ್ಗಸೂಚಿಗಳನ್ನು ಹೊರಡಿಸಿದ್ದು, ದಿನಾಂಕ:30.04.2021ರವರೆಗೆ ಜಾರಿಯಲ್ಲಿರುತ್ತದೆ. ಅದರನ್ವಯ, ರಾಜ್ಯ ಸರ್ಕಾರವು ಆದೇಶ ಸಂಖ್ಯೆ: ಕಂಇ 158 ಟಿಎನ್‌ಆರ್ 2020, ದಿನಾಂಕ:29.03.2021ರಲ್ಲಿ ಕೋವಿಡ್-19 ವೈರಾಣು ಸೋಂಕು ಪರೀಕ್ಷೆ, ಪತ್ತೆ ಮತ್ತು ಚಿಕಿತ್ಸೆಗೆ ಸಂಬಂಧಿಸಿದಂತೆ ಮಾರ್ಗಸೂಚಿಗಳನ್ನು ಹೊರಡಿಸಿದ್ದು, ದಿನಾಂಕ:30.04.2021ರ ವರೆಗೆ ಜಾರಿಯಲ್ಲಿರುತ್ತದೆ. ರಾಜ್ಯ ಸರ್ಕಾರದ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯು ಪ್ರತ್ಯೇಕವಾಗಿ HFW 90 ACS 2021 ದಿನಾಂಕ:02.04.2021 ಮತ್ತು ದಿನಾಂಕ:04.04.2021ರ ತಿದ್ದುಪಡಿ ಆದೇಶದಲ್ಲಿ ಪ್ರಮಾಣಿತ ಕಾರ್ಯವಿಧಾನಗಳನ್ನು ಹೊರಡಿಸಿದೆ.

2) ಪ್ರಸ್ತುತ, ರಾಜ್ಯದಲ್ಲಿ ಕೋವಿಡ್-19 ಸೋಂಕು ಹರಡುವಿಕೆ ಉಲ್ಬಣವಾಗಿದ್ದು, ನಿಯಂತ್ರಣ ಕಾರ್ಯ ಅತ್ಯಾವಶ್ಯಕವಾಗಿದೆ.

3) ಆದ್ದರಿಂದ, ವಿಪತ್ತು ನಿರ್ವಹಣೆ ಕಾಯ್ದೆ, 2005 ರಲ್ಲಿನ ಸೆಕ್ಷನ್ 24ರಲ್ಲಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ **ಬೆಂಗಳೂರು ನಗರ, ಮೈಸೂರು, ಮಂಗಳೂರು, ಉಡುಪಿ-ಮಣಿಪಾಲ್, ಬೀದರ್, ಕಲಬುರಗಿ** ಮತ್ತು **ತುಮಕೂರು** ನಗರಗಳಲ್ಲಿ **ದಿನಾಂಕ:10.04.2021ರಿಂದ ದಿನಾಂಕ:20.04.2021ರ ವರೆಗೆ (ಎರಡು ದಿನಗಳನ್ನು ಒಳಗೊಂಡಂತೆ) "ಕರೋನ ಕರ್ಫ್ಯೂ" ಅನ್ನು ರಾತ್ರಿ 10.00 ಗಂಟೆಯಿಂದ ಬೆಳಿಗ್ಗೆ 5.00 ಗಂಟೆಯವರೆಗೆ ಜಾರಿಗೊಳಿಸಲಾಗಿದೆ**.

4) ಕರೋನ ಕರ್ಫ್ಯೂ ಸಂದರ್ಭದಲ್ಲಿ ಈ ಕೆಳಕಂಡ ಅತ್ಯವಶ್ಯಕ ಸೇವೆಗಳಿಗೆ ಮಾತ್ರ ಅನುಮತಿಸಿದ್ದು, ಉಳಿದಂತೆ ಎಲ್ಲಾ ಸೇವೆಗಳನ್ನು / ಸಂಚಾರಗಳನ್ನು ನಿಷೇಧಿಸಲಾಗಿದೆ.

i. ವಿವಿಧ ಆರೋಗ್ಯ ಸಂಬಂಧಿತ ಸಮಸ್ಯೆಗಳಿಂದ ಬಳಲುತ್ತಿರುವ ವ್ಯಕ್ತಿಗಳಿಗೆ ಮತ್ತು ಅವರ ಸಹಾಯಕರಿಗೆ ವೈದ್ಯಕೀಯ ಸೇವೆಗಾಗಿ ಸಂಚಾರಕ್ಕೆ ಅನುಮತಿಸಿದೆ.

ii. ರಾತ್ರಿ ಪಾಳಿಯಲ್ಲಿ ಕಾರ್ಯ ನಿರ್ವಹಿಸುವಂತಹ ಎಲ್ಲಾ ಕಾರ್ಖಾನೆಗಳು / ಕಂಪನಿಗಳು / ಸಂಸ್ಥೆಗಳು ಯಥಾರೀತಿ ಕಾರ್ಯ ನಿರ್ವಹಿಸಲು ಅನುಮತಿಸಿದೆ. ಆದರೆ, ಸಂಬಂಧಿಸಿದ ಕಾರ್ಮಿಕರು / ನೌಕರರು ಕರೋನ ಕರ್ಫ್ಯೂ ಅವಧಿಗೆ ಮುನ್ನವೆ ಕರ್ತವ್ಯದಲ್ಲಿ ಹಾಜರಿರತಕ್ಕದ್ದು.

iii. ವೈದ್ಯಕೀಯ ಸೇವೆಗಳನ್ನು ಮತ್ತು ತುರ್ತು ಚಟುವಟಿಕೆಗೆ ಮಾತ್ರ ಅನುಮತಿಸಿದ್ದು, ಇನ್ನುಳಿದಂತೆ ಎಲ್ಲಾ ವಾಣಿಜ್ಯ ಚಟುವಟಿಕೆಗಳನ್ನು ನಿರ್ಬಂಧಿಸಿದೆ.

iv. ಅತ್ಯವಶ್ಯಕ ಸೇವೆಗಳನ್ನು ಒದಗಿಸುವಂತಹ ವಾಹನಗಳು / ಸರಕು ಸಾಗಾಣಿಕೆ ವಾಹನಗಳು / Home Delivery / E-Commerce ಮತ್ತು ಖಾಲಿ ವಾಹನಗಳ ಸಂಚಾರಕ್ಕೆ ಮಾತ್ರ ಅನುಮತಿಸಿದೆ.

...2

Kiran Raghupathi

v. ರಾತ್ರಿ ವೇಳೆಯಲ್ಲಿನ ಬಸ್ಸು, ರೈಲು ಹಾಗೂ ವಿಮಾನದ ದೂರ ಪ್ರಯಾಣಕ್ಕೆ ಅನುಮತಿಸಿದೆ. ಪ್ರಯಾಣಿಕರು ಮನೆಯಿಂದ ನಿಲ್ದಾಣಗಳಿಗೆ ಮತ್ತು ನಿಲ್ದಾಣಗಳಿಂದ ಮನೆಗೆ ಅಧಿಕೃತ ಟಿಕೆಟ್‌ಗಳ ಆಧಾರದ ಮೇಲೆ ಆಟೋ / ಕ್ಯಾಬ್ ಇತ್ಯಾದಿಗಳ ಮೂಲಕ ಸಂಚರಿಸಲು ಅನುಮತಿಸಿದೆ.

5) ಈ ಆದೇಶವನ್ನು ಆಯುಕ್ತರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ಪೊಲೀಸ್ ಆಯುಕ್ತರು, ಬೆಂಗಳೂರು ನಗರ, ಮೈಸೂರು, ಕಲಬುರಗಿ, ಮಂಗಳೂರು ಮತ್ತು ಸಂಬಂಧಿಸಿದ ಜಿಲ್ಲೆಗಳ ಜಿಲ್ಲಾಧಿಕಾರಿಗಳು ಹಾಗೂ ಪೊಲೀಸ್ ವರಿಷ್ಠಾಧಿಕಾರಿಗಳು ಕಟ್ಟುನಿಟ್ಟಾಗಿ ಜಾರಿಗೊಳಿಸತಕ್ಕದ್ದು. ಆದೇಶ ಪಾಲನೆಯಲ್ಲಿ ಲೋಪವೆಸಗುವಂತಹವರ ವಿರುದ್ಧ ವಿಪತ್ತು ನಿರ್ವಹಣಾ ಕಾಯ್ದೆ, 2005ರ ಸೆಕ್ಷನ್ 51 ರಿಂದ 60 ಹಾಗೂ ಭಾರತೀಯ ದಂಡ ಸಂಹಿತೆ ಹಾಗೂ ಅನ್ವಯವಾಗಬಹುದಾದ ಇತರ ಕಾನೂನು ಉಪಬಂಧಗಳ ಅನುಸಾರ ಕ್ರಮ ಕೈಗೊಳ್ಳತಕ್ಕದ್ದು.

**(ಪಿ. ರವಿ ಕುಮಾರ್)**
ಮುಖ್ಯ ಕಾರ್ಯದರ್ಶಿ ಹಾಗೂ
ರಾಜ್ಯ ಕಾರ್ಯಕಾರಿ ಸಮಿತಿ ಅಧ್ಯಕ್ಷರು

**ಇವರಿಗೆ:**

ಸಂಕಲನಕಾರರು, ಕರ್ನಾಟಕ ರಾಜ್ಯ ಪತ್ರ, ಬೆಂಗಳೂರು.

Kiran Raghupathi